ಮುಂಡಗೋಡ ಪಟ್ಟಣದಲ್ಲಿ ಕುಡಿಯುವ ನೀರಿನ ಅಭಾವ

1108 (1711) ಮಾನ್ಯ ಗ್ರಾಮಾಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ ಮಂಡಲ ಪಂಚಾಯಿತಿಯ ವ್ಯಾಪ್ತಿಯಲ್ಲಿ ಬರುವ ಮುಂಡಗೋಡ ಪಟ್ಟಣದಲ್ಲಿ ಕುಡಿಯುವ ನೀರಿನ ಅಭಾವವಿರುವುದು ನಿಜವಲ್ಲವೇ?

2) ಹಾಗಿದ್ದಲ್ಲಿ ಈ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆಯನ್ನೇನಾದರೂ ತಯಾರಿಸಲಾಗಿದೆಯೇ?

3) ಹಾಗಿದ್ದಲ್ಲಿ ಇದರ ವೆಚ್ಚವೆಷ್ಟು?

4) ಒಂದು ವೇಳೆ ಯೋಜನೆಯನ್ನು ತಯಾರಿಸದಿದ್ದಲ್ಲಿ ಕೂಡಲೇ ಕುಡಿಯುವ ನೀರಿನ ಯೋಜನೆಯನ್ನು ತಯಾರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮಾಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

1) ಹೌದು.

2) ಇನ್ನೂ ಪರಿಶೀಲನೆಯಲ್ಲಿದೆ.

3) ಉದ್ಭವಿಸುವುದಿಲ್ಲ.

4) ಯೋಜನೆಯ ಬಗ್ಗೆ ಅನ್ವೇಷಣೆ ನಡೆಸಿ ಸೂಕ್ತ ಅಂದಾಜು ತಯಾರು ಮಾಡಿ ನಂತರ ಮುಂದಿನ ವರ್ಷದಲ್ಲಿ ಅನುದಾನದ ಲಭ್ಯತೆಯ ಆಧಾರದ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದು.

ಜಿಲ್ಲಾಪರಿಷತ್ತುಗಳಲ್ಲಿ ಅಧಿಕಾರ ಕೇಂದ್ರೀಕರಣ

1109 (1712) ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಗ್ರಾಮಾಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾಪರಿಷತ್ತಿನ ಮೂಲಕ ಅಧಿಕಾರ ವಿಕೇಂದ್ರೀಕರಣ ಮಾಡುವ ನೆಪದಲ್ಲಿ ಸರ್ಕಾರವು ಅಧಿಕಾರವನ್ನು ಕೇಂದ್ರೀಕರಣ ಮಾಡಲು ಹೊರಟಿರುವುದು ನಿಜವೇ?

ಆ) ಹಾಗಿದ್ದಲ್ಲಿ ಕಳೆದ 2 ವರ್ಷಗಳಲ್ಲಿ ಸರ್ಕಾರವು ಜಿಲ್ಲಾಪರಿಷತ್ತುಗಳಿಂದ ಯಾವ ಯಾವ ಇಲಾಖೆಗಳನ್ನು ತನ್ನ ವಶಕ್ಕೆ ತೆಗೆದುಕೊಂಡಿದೆ?

ಇ) ವಶಕ್ಕೆ ತೆಗೆದುಕೊಂಡ ಬಗ್ಗೆ ವಿವರಣೆಯನ್ನು ನೀಡುವುದು?